**Akashvani : Bangalore**
**National Bulletin In Kannada**
**31.03.2024 / 7.35 am**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**31.03.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ದೇಶದ ಮಾಜಿ ಪ್ರಧಾನಿ ಎಲ್.ಕೆ. ಅಡ್ವಾಣಿಗೆ ಇಂದು ಭಾರತ ರತ್ನ ಪ್ರದಾನ

೨. ಉತ್ತರ ಪ್ರದೇಶದಲ್ಲಿ ಇಂದು ಚುನಾವಣಾ ರ‍್ಯಾಲಿಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಚಾಲನೆ

೩. ಜಾರಿ ನಿರ್ದೇಶನಾಲಯದಿಂದ ಆಲ್ಕೆಮಿಸ್ಟ್ ಗ್ರೂಪ್ ಕಂಪನಿಗಳಿಗೆ ಸೇರಿದ ೨೯ ಕೋಟಿ ರೂ. ಮೌಲ್ಯದ ಚರಾಸ್ತಿ ಮತ್ತು ಸ್ಥಿರಾಸ್ತಿ ಮುಟ್ಟುಗೋಲು

೪. ಏಪ್ರಿಲ್ ೧ರಿಂದ ನೂತನ ಆರ್ಥಿಕ ವರ್ಷ ಆರಂಭ; ನೂತನ ಪ್ರಕ್ರಿಯೆಗಳು ಕಾರ್ಯಾರಂಭ

೫. ಐಪಿಎಲ್ ಕ್ರಿಕೆಟ್- ಪಂಜಾಬ್ ಕಿಂಗ್ಸ್ ವಿರುದ್ಧ ಲಖನೌ ತಂಡಕ್ಕೆ ೨೧ ರನ್ ಜಯ

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ದೇಶದ ಅತ್ಯುನ್ನತ ನಾಗರಿಕ ಗೌರವ ಭಾರತ ರತ್ನ ಪ್ರಶಸ್ತಿಗಳನ್ನು ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ನಿನ್ನೆ ಪ್ರದಾನ ಮಾಡಿದರು. ದೇಶಕ್ಕಾಗಿ ಗಣನೀಯ ಸೇವೆ ಸಲ್ಲಿಸಿದ ಮಾಜಿ ಪ್ರಧಾನಿ ಪಿ.ವಿ.ನರಸಿಂಹರಾವ್ ಮತ್ತು ಚೌಧರಿ ಚರಣ ಸಿಂಗ್, ಕೃಷಿ ವಿಜ್ಞಾನಿ ಎಂ.ಎಸ್.ಸ್ವಾಮಿನಾಥನ್ ಹಾಗೂ ಬಿಹಾರದ ಮಾಜಿ ಮುಖ್ಯಮಂತ್ರಿ ಕರ್ಪೂರಿ ಠಾಕೂರ್ ಅವರಿಗೆ ಮರಣೋತ್ತರವಾಗಿ ಈ ಗೌರವಗಳನ್ನು ಪ್ರದಾನ ಮಾಡಲಾಯಿತು. ದೇಶದ ಮಾಜಿ ಉಪಪ್ರಧಾನಿ ಹಾಗೂ ಹಿರಿಯ ಬಿಜೆಪಿ ಧುರೀಣ ಎಲ್.ಕೆ.ಅಡ್ವಾಣಿ ಅವರಿಗೆ ಈ ಗೌರವನ್ನು ಇಂದು ಪ್ರದಾನ ಮಾಡಲಾಗುವುದು.

**<><*<><>*><>**

ದೇಶಕ್ಕೆ ಅನುಪಮ ಸೇವೆ ಸಲ್ಲಿಸಿದ ನಾಯಕರ ಕೊಡುಗೆಯನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಈ ಸಂಬಂಧ ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿರುವ ಪ್ರಧಾನಿ, ದೇಶದ ಅಭಿವೃದ್ಧಿಗೆ, ವಿಶೇಷವಾಗಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿಗೆ ಚೌಧರಿ ಚರಣ್ ಸಿಂಗ್ ಅವರ ಕೊಡುಗೆಗಳನ್ನು ಗುರುತಿಸಿ ಭಾರತ ರತ್ನ ಪ್ರಶಸ್ತಿ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಪಿ.ವಿ.ನರಸಿಂಹ ರಾವ್ ಅವರು ದೇಶದ ಪ್ರಗತಿ ಮತ್ತು ಆಧುನೀಕರಣಕ್ಕಾಗಿ ವ್ಯಾಪಕವಾಗಿ ಕೆಲಸ ಮಾಡಿದರು ಮತ್ತು ಅವರು ಗೌರವಾನ್ವಿತ ವಿದ್ವಾಂಸ ಮತ್ತು ಚಿಂತಕರಾಗಿಯೂ ಹೆಸರುವಾಸಿಯಾಗಿದ್ದಾರೆ ಎಂದು ಅವರು ಹೇಳಿದ್ದಾರೆ. ಕರ್ಪೂರಿ ಠಾಕೂರ್ ಅವರಿಗೆ ಭಾರತ ರತ್ನ ನೀಡಿರುವುದು ಸಾಮಾಜಿಕ ನ್ಯಾಯ ಮತ್ತು ಸಮಾನತೆಗಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟ ಮಹಾನ್ ವ್ಯಕ್ತಿಗೆ ಸೂಕ್ತ ಗೌರವವಾಗಿದೆ ಎಂದು ಪ್ರಧಾನಿ ಹೇಳಿದ್ದಾರೆ. ಡಾ.ಎಂ.ಎಸ್.ಸ್ವಾಮಿನಾಥನ್ ಅವರ ಪ್ರಯತ್ನಗಳು ಭಾರತವನ್ನು ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬನೆಯತ್ತ ಕೊಂಡೊಯ್ದವು ಎಂದು ಪ್ರಧಾನಿ ಶ್ಲಾಘಿಸಿದ್ದಾರೆ.

**<><*<><>*><>**

ಬಿಜೆಪಿ ಹಿರಿಯ ಮುಖಂಡ ಮತ್ತು ಪ್ರಧಾನಿ ನರೇಂದ್ರ ಮೋದಿ ಇಂದು ಮೀರತ್ ನಲ್ಲಿ ಚುನಾವಣಾ ರಾಲಿಯನ್ನುದ್ದೇಶಿಸಿ ಮಾತನಾಡುವ ಮೂಲಕ ಉತ್ತರ ಪ್ರದೇಶದಲ್ಲಿ ಚುನಾವಣಾ ಪ್ರಚಾರಕ್ಕೆ ಚಾಲನೆ ನೀಡಲಿದ್ದಾರೆ. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ರಾಷ್ಟ್ರೀಯ ಲೋಕದಳದ ಅಧ್ಯಕ್ಷ ಜಯಂತ್ ಚೌಧರಿ ಮತ್ತು ಹಲವಾರು ಬಿಜೆಪಿ ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿರಲಿದ್ದಾರೆ. ಮೀರತ್ ಲೋಕಸಭಾ ಕ್ಷೇತ್ರದಿಂದ ಟಿವಿ ಧಾರಾವಾಹಿ ರಾಮಾಯಣ ಖ್ಯಾತಿಯ ಅರುಣ್ ಗೋವಿಲ್ ಅವರನ್ನು ಬಿಜೆಪಿ ಕಣಕ್ಕಿಳಿಸಿದೆ. ಉತ್ತರ ಪ್ರದೇಶದಲ್ಲಿ ಏಳು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ಬಿಜೆಪಿ ನೇತೃತ್ವದ ಎನ್ ಡಿಎ ಕೇಂದ್ರದಲ್ಲಿ ಮತ್ತೆ ಅಧಿಕಾರಕ್ಕೆ ಬರಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದೆ ಮತ್ತು ಇದಕ್ಕಾಗಿ ಉತ್ತರ ಪ್ರದೇಶವು ಅತಿ ಹೆಚ್ಚು ೮೦ ಸಂಸದೀಯ ಕ್ಷೇತ್ರಗಳನ್ನು ಹೊಂದಿರುವುದರಿಂದ ನಿರ್ಣಾಯಕವಾಗಿದೆ.

**<><*<><>*><>**

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಮುಂಬರುವ ಲೋಕಸಭಾ ಚುನಾವಣೆಗೆ ಚುನಾವಣಾ ಪ್ರಣಾಳಿಕೆ ಸಮಿತಿಯನ್ನು ಪ್ರಕಟಿಸಿದ್ದಾರೆ. ೨೭ ಸದಸ್ಯರ ಸಮಿತಿಯ ನೇತೃತ್ವವನ್ನು ಬಿಜೆಪಿ ಹಿರಿಯ ನಾಯಕ ಮತ್ತು ಕೇಂದ್ರ ಸಚಿವ ರಾಜನಾಥ್ ಸಿಂಗ್ ವಹಿಸಲಿದ್ದಾರೆ.

ಬಿಜೆಪಿಯ ಹಿರಿಯ ನಾಯಕಿ ನಿರ್ಮಲಾ ಸೀತಾರಾಮನ್ ಅವರು ಸಂಚಾಲಕರಾಗಿದ್ದು, ಪಿಯೂಷ್ ಗೋಯಲ್ ಸಹ ಸಂಚಾಲಕರಾಗಿದ್ದಾರೆ.

**<><*<><>*><>**

ಮುಂಬರುವ ಲೋಕಸಭಾ ಚುನಾವಣೆಗೆ ಬಿಜೆಪಿ ೧೧ ಅಭ್ಯರ್ಥಿಗಳ ಮತ್ತೊಂದು ಪಟ್ಟಿಯನ್ನು ಬಿಡುಗಡೆ ಮಾಡಿದೆ. ಕಟಕ್ ಲೋಕಸಭಾ ಕ್ಷೇತ್ರದಿಂದ ಭರ್ತೃಹರಿ ಮಹತಾಬ್ ಬಿಜೆಪಿ ಅಭ್ಯರ್ಥಿಯಾಗಲಿದ್ದಾರೆ. ಅಮೆರಿಕದಲ್ಲಿನ ಮಾಜಿ ಭಾರತೀಯ ರಾಯಭಾರಿ ತರಣ್ಜಿತ್ ಸಿಂಗ್ ಸಂಧು ಅಮೃತಸರ ಲೋಕಸಭಾ ಕ್ಷೇತ್ರದಿಂದ ಮತ್ತು ಹನ್ಸ್ ರಾಜ್ ಹನ್ಸ್ ಫರಿದ್ಕೋಟ್ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಕಣಕ್ಕಿಳಿಯಲಿದ್ದಾರೆ. ಪ್ರಣೀತ್ ಕೌರ್ ಪಟಿಯಾಲ ಲೋಕಸಭಾ ಕ್ಷೇತ್ರದಿಂದ, ರವ್ನೀತ್ ಸಿಂಗ್ ಬಿಟ್ಟು ಲುಧಿಯಾನದಿಂದ ಮತ್ತು ಸುಶೀಲ್ ಕುಮಾರ್ ರಿಂಕು ಪಂಜಾಬ್ ನ ಜಲಂಧರ್ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ.

**<><*<><>*><>**

ಆಲ್ಕೆಮಿಸ್ಟ್ ಗ್ರೂಪ್ ಕಂಪನಿಗಳಿಗೆ ಸೇರಿದ ೨೯ ಕೋಟಿ ರೂಪಾಯಿ ಮೌಲ್ಯದ ಚರಾಸ್ತಿ ಮತ್ತು ಸ್ಥಿರಾಸ್ತಿಗಳನ್ನು ಜಾರಿ ನಿರ್ದೇಶನಾಲಯ ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡಿದೆ. ಬೀಚ್ ಕಿಂಗ್ ಏರ್ ಸಿ -೯೦ ಎ ವಿಮಾನ, ಹಿಮಾಚಲ ಪ್ರದೇಶ ಮತ್ತು ಮಧ್ಯಪ್ರದೇಶದಲ್ಲಿರುವ ಫ್ಲ್ಯಾಟ್ ಗಳು ಮತ್ತು ಭೂಮಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. ಆಲ್ ಇಂಡಿಯಾ ತೃಣಮೂಲ ಕಾಂಗ್ರೆಸ್ ನ ಮಾಜಿ ಸದಸ್ಯ ಕನ್ವರ್ ದೀಪ್ ಸಿಂಗ್ ಈ ಗುಂಪಿನ ನೇತೃತ್ವ ವಹಿಸಿದ್ದಾರೆ ಎಂದು ಸಂಸ್ಥೆ ತಿಳಿಸಿದೆ. ಆಲ್ಕೆಮಿಸ್ಟ್ ಗ್ರೂಪ್ ನ ಅನೇಕ ವ್ಯಕ್ತಿಗಳು ಮತ್ತು ಸಮೂಹ ಕಂಪನಿಗಳ ವಿರುದ್ಧ ಸಿಬಿಐ, ಲಕ್ನೋ ಮತ್ತು ಕೋಲ್ಕತಾ ಪೊಲೀಸರು ದಾಖಲಿಸಿದ ಎಫ್ಐಆರ್ ಗಳ ಆಧಾರದ ಮೇಲೆ ಜಾರಿ ನಿರ್ದೇಶನಾಲಯ ತನಿಖೆಯನ್ನು ಪ್ರಾರಂಭಿಸಿತು. ಆಲ್ಕೆಮಿಸ್ಟ್ ಗ್ರೂಪ್ ತನ್ನ ಕಂಪನಿಗಳಲ್ಲಿ ಹೂಡಿಕೆದಾರರು ಮತ್ತು ಸಂತ್ರಸ್ತರಿಂದ ಹೆಚ್ಚಿನ ಆದಾಯವನ್ನು ನೀಡುವ ಮತ್ತು ಫ್ಲ್ಯಾಟ್ ಗಳು ಮತ್ತು ವಿಲ್ಲಾಗಳನ್ನು ನೀಡುವ ಸುಳ್ಳು ಭರವಸೆಯ ಮೇಲೆ ಒಂದು ಸಾವಿರದ ೮೦೦ ಕೋಟಿ ರೂ.ಗಿಂತ ಹೆಚ್ಚಿನ ಹಣವನ್ನು ಸಂಗ್ರಹಿಸಿದೆ ಎಂದು ತನಿಖೆಯಿಂದ ತಿಳಿದುಬಂದಿದೆ.

**<><*<><>*><>**

ನಾಳೆ ಏಪ್ರಿಲ್ ೧ ರಿಂದ ನೂತನ ಆರ್ಥಿಕ ವರ್ಷ ಆರಂಭವಾಗಲಿದೆ. ವಹಿವಾಟು ಕ್ಷೇತ್ರದಲ್ಲಿ ನೂತನ ಪ್ರಕ್ರಿಯೆಗಳು ಕಾರ್ಯಾರಂಭ ಮಾಡಲಿವೆ. ಇದಲ್ಲದೇ ಅನೇಕ ನಿಯಮಗಳಲ್ಲಿ ಮಹತ್ವದ ಬದಲಾವಣೆಯಾಗಲಿವೆ.

ಫಾಸ್ಟ್‌ಟ್ಯಾಗ್ ಕೆವೈಸಿ ಅಪ್‌ಡೇಟಿಂಗ್, ಪ್ಯಾನ್-ಆಧಾರ್ ಜೋಡಣೆಗೆ ನೀಡಲಾಗಿದ್ದ ಅವಕಾಶ ಇಂದಿಗೆ ಮುಕ್ತಾಯವಾಗುವುದು. ಭಾರತದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಫಾಸ್ಟ್‌ಟ್ಯಾಗ್ ಬಳಕೆಗೆ ಕೆವೈಸಿಯನ್ನು ಕಡ್ಡಾಯಗೊಳಿಸಿದೆ. ಏಪ್ರಿಲ್ ೧ ರಿಂದ ಹೆದ್ದಾರಿಗಳಲ್ಲಿ ಬಳಕೆಯಾಗುವ ಫಾಸ್ಟ್‌ಟ್ಯಾಗ್‌ಗಳ ವೈಯಕ್ತಿಕ ಮಾಹಿತಿ ಅಂದರೆ ಕೆವೈಸಿಯನ್ನು ಕಡ್ಡಾಯವಾಗಿ ಅಪ್‌ಡೇಟ್ ಮಾಡಬೇಕಾಗುತ್ತದೆ. ಒಂದು ವೇಳೆ ಈ ನಿಯಮ ಪಾಲನೆಯಾಗದಿದ್ದಲ್ಲಿ ಏಪ್ರಿಲ್ ೧ ರಿಂದ ವಾಹನ ಸವಾರರು ಹೆದ್ದಾರಿಗಳಲ್ಲಿ ಪರದಾಡಬೇಕಾಗುತ್ತದೆ. ಕೆವೈಸಿ ಅಪ್‌ಡೇಟ್ ಆಗಿಲ್ಲದ ಫಾಸ್ಟ್‌ಟ್ಯಾಗ್‌ಗಳನ್ನು ಬ್ಯಾಂಕ್‌ಗಳು ನಿಷ್ಕ್ರಿಯಗೊಳಿಸಲಿದ್ದು, ಫಾಸ್ಟ್‌ಟ್ಯಾಗ್‌ಗಳಲ್ಲಿ ಬ್ಯಾಲೆನ್ಸ್ ಮೊತ್ತ ಇದ್ದರೂ ಸಹ ಟೋಲ್‌ಗಳಲ್ಲಿ ಪರಿಗಣಿಸಲಾಗುವುದಿಲ್ಲ. ಪ್ಯಾನ್ ಮತ್ತು ಆಧಾರ್ ಜೋಡಣೆಗೆ ಅಂತಿಮ ಗಡುವು ಸಹ ಇಂದು ಮುಕ್ತಾಯವಾಗುವುದು. ಪ್ಯಾನ್-ಆಧಾರ್ ಜೋಡಣೆ ಮಾಡಿಲ್ಲದಿದ್ದಲ್ಲಿ, ಏಪ್ರಿಲ್ ೧ರ ನಂತರ ಇದಕ್ಕೆ ಒಂದು ಸಾವಿರ ರೂಪಾಯಿ ದಂಡ ಕಟ್ಟಬೇಕಾಗುತ್ತದೆ. ಏಪ್ರಿಲ್ ೧ ರಿಂದ ಎಸ್‌ಬಿಐ ಕ್ರೆಡಿಟ್‌ಕಾರ್ಡ್ ನಿಯಮಗಳು ಸಹ ಬದಲಾಗಲಿವೆ. ಕ್ರೆಡಿಟ್‌ಕಾರ್ಡ್ ಮೂಲಕ ಬಾಡಿಗೆ ಪಾವತಿಗಳಿಗೆ ರಿವಾರ್ಡ್ ಪಾಯಿಂಟ್ಸ್ ದೊರೆಯುವುದಿಲ್ಲ. ನೂತನ ಆರ್ಥಿಕ ವರ್ಷದಿಂದ ವಿಮಾ ನಿಯಮಗಳಲ್ಲೂ ಬದಲಾವಣೆಯಾಗಲಿದೆ. ಸರಂಡರ್ ವ್ಯಾಲ್ಯೂ ನಿಯಮವನ್ನು ಬದಲಾಯಿಸಲಾಗುವುದು. ವಿಮಾ ಗ್ರಾಹಕರು ಎಷ್ಟು ತಡವಾಗಿ ಪಾಲಿಸಿ ಸರಂಡರ್ ಮಾಡುತ್ತಾರೋ, ಅದಕ್ಕೆ ಅನುಗುಣವಾಗಿ ಹೆಚ್ಚು ಸರಂಡರ್ ವ್ಯಾಲ್ಯೂ ದೊರೆಯಲಿದೆ. ನೌಕರರ ಭವಿಷ್ಯ ನಿಧಿ ನಿಯಮಗಳು ಬದಲಾಗಲಿವೆ. ಹೊಸ ನಿಯಮದಂತೆ ಉದ್ಯೋಗ ಬದಲಾದಾಗ ಭವಿಷ್ಯ ನಿಧಿ ಖಾತೆ ಸ್ವಯಂ ಚಾಲಿತ ವ್ಯವಸ್ಥೆಯ ಮೂಲಕ ವರ್ಗಾವಣೆಯಾಲಿದೆ. ಇದಕ್ಕಾಗಿ ಖಾತೆದಾರರ ಮನವಿ ಅರ್ಜಿ ಅಗತ್ಯವಿಲ್ಲ.

**<><*<><>*><>**

ಐಎನ್‌ಡಿಐಎ -ಬ್ಲಾಕ್, ಇಂದು ನವದೆಹಲಿಯ ರಾಮಲೀಲಾ ಮೈದಾನದಲ್ಲಿ ಪ್ರಜಾತಂತ್ರ ರಕ್ಷಿಸಿ ರ್‍ಯಾಲಿ ಆಯೋಜಿಸಿದೆ. ಕಾಂಗ್ರೆಸ್, ಎನ್‌ಸಿಪಿ, ಶಿವಸೇನಾ ಯುಬಿಟಿ, ಸಮಾಜವಾದಿ ಪಕ್ಷ, ಆಮ್‌ಆದ್ಮಿ ಪಕ್ಷ, ಆರ್‌ಜೆಡಿ, ಡಿಎಂಕೆ, ನ್ಯಾಷನಲ್ ಕಾನ್ಫರೆನ್ಸ್, ಜಾರ್ಖಂಡ್ ಮುಕ್ತಿ ಮೋರ್ಚಾ, ಎಡಪಕ್ಷಗಳು ಹಾಗೂ ಇನ್ನಿತರ ಪಕ್ಷಗಳ ಧುರೀಣರು ಇದರಲ್ಲಿ ಭಾಗವಹಿಸಲಿದ್ದಾರೆ. ರ್‍ಯಾಲಿ ಕುರಿತಂತೆ ಮಾಹಿತಿ ನೀಡಿದ ಕಾಂಗ್ರೆಸ್ ಧುರೀಣ ಜೈರಾಮ್ ರಮೇಶ್, ಹಣದುಬ್ಬರ ಏರಿಕೆ, ನಿರುದ್ಯೋಗ, ಆರ್ಥಿಕ ಅಸಮಾನತೆ, ರಾಜಕೀಯ ದೃವೀಕರಣ ಮೊದಲಾದವು ರ್‍ಯಾಲಿಯ ವಿಷಯಗಳಾಗಿವೆ ಎಂದು ತಿಳಿಸಿದ್ದಾರೆ.

**<><*<><>*><>**

ಈಶಾನ್ಯ ಭಾರತದಲ್ಲಿ ನಾಳೆಯವರೆಗೆ ತೀವ್ರ ಮಳೆ ಮತ್ತು ಗುಡುಗು ಸಹಿತ ಮಳೆ ಮುಂದುವರಿಯುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಅರುಣಾಚಲ ಪ್ರದೇಶ, ಅಸ್ಸಾಂ, ಮೇಘಾಲಯ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ ಮತ್ತು ತ್ರಿಪುರಾದಲ್ಲಿ ಧಾರಾಕಾರ ಮಳೆ ಹಾಗೂ ಹಿಮಪಾತವಾಗುವ ಸಾಧ್ಯತೆಯಿದೆ. ಒಡಿಶಾ, ಗಂಗಾ ಪಶ್ಚಿಮ ಬಂಗಾಳ, ಜಾರ್ಖಂಡ್, ಪೂರ್ವ ಮಧ್ಯಪ್ರದೇಶ, ಮಧ್ಯ ಮಹಾರಾಷ್ಟ್ರ, ವಿದರ್ಭ ಮತ್ತು ಛತ್ತೀಸ್ ಗಢದಲ್ಲಿ ಇಂದು ಗುಡುಗು ಸಹಿತ ಹಗುರದಿಂದ ಮಧ್ಯಮ ಮಳೆಯಾಗಲಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ಕರ್ನಾಟಕದ ಉತ್ತರ ಒಳನಾಡು, ತೆಲಂಗಾಣ ಮತ್ತು ರಾಯಲಸೀಮಾದಲ್ಲಿ ಬುಧವಾರದವರೆಗೆ ಬಿಸಿಗಾಳಿ ಬೀಸಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದೇಶದ ಅನೇಕ ಭಾಗಗಳಲ್ಲಿ ಗರಿಷ್ಠ ತಾಪಮಾನವು ೨ ರಿಂದ ೩ ಡಿಗ್ರಿ ಸೆಲ್ಸಿಯಸ್ ಏರಿಕೆಯಾಗುವ ಸಾಧ್ಯತೆ ಇದೆ.

<><*<><>*><>

ಲಖನೌದ ಏಕನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಲಖನೌ ಸೂಪರ್ ಜಯಂಟ್ಸ್ ತಂಡ ೨೧ ರನ್ ಗಳಿಂದ ಪಂಜಾಬ್ ಕಿಂಗ್ಸ್ ತಂಡವನ್ನು ಸೋಲಿಸಿ, ಟೂರ್ನಿಯಲ್ಲಿ ಗೆಲುವಿನ ಖಾತೆ ತೆರೆದಿದೆ. ಇಂದು ಎರಡು ಐಪಿಎಲ್ ಪಂದ್ಯಗಳು ನಡೆಯಲಿದ್ದು, ಅಹಮದಾಬಾದ್ ನಲ್ಲಿ ಮಧ್ಯಾಹ್ನ ೩.೩೦ಕ್ಕೆ ಆರಂಭವಾಗಲಿರುವ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ಮತ್ತು ಸನ್ ರೈಸರ್ಸ್ ಹೈದರಾಬಾದ್ ಹಾಗೂ ವಿಶಾಖಪಟ್ಟಣದಲ್ಲಿ ರಾತ್ರಿ ೭.೩೦ಕ್ಕೆ ನಡೆಯಲಿರುವ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಮತ್ತು ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಪೈಪೋಟಿ ನಡೆಸಲಿವೆ.

<><*<><>*><>

ಭಾರತದ ರೋಹನ್ ಬೋಪಣ್ಣ ಮತ್ತು ಆಸ್ಟ್ರೇಲಿಯಾ ಜತೆಗಾರ ಮ್ಯಾಥ್ಯೂ ಎಬ್ಡೆನ್ ಜೋಡಿ ಮಿಯಾಮಿ ಟೆನಿಸ್ ಟೂರ್ನಿಯ ಪುರುಷರ ಡಬಲ್ಸ್ ವಿಭಾಗದಲ್ಲಿ ಚಾಂಪಿಯನ್ ಆಗಿದೆ. ಕಳೆದ ರಾತ್ರಿ ನಡೆದ ಫೈನಲ್ ಪಂದ್ಯದಲ್ಲಿ ವಿಶ್ವದ ಅಗ್ರಮಾನ್ಯ ಭಾರತ - ಆಸ್ಟ್ರೇಲಿಯಾದ ಡಬಲ್ಸ್ ಜೋಡಿ, ೬-೭, ೬-೩, ೧೦-೬ ಸೆಟ್ ಗಳಿಂದ ಇವಾನ್ ಡಾಡಿಗ್ ಮತ್ತು ಕ್ರಾಜೀಸೆಕ್ ವಿರುದ್ಧ ಜಯ ಗಳಿಸಿ ಪ್ರಶಸ್ತಿ ಗೆದ್ದುಕೊಂಡಿದೆ. ನಮ್ಮ

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>